ತಂತಿ ವಿಳಾಸ: ಯೂನಿರ್ಸಿಟಿ
ದೂರವಾಣಿ ಸಂಖ್ಯೆ : 2419677 / 24193

e-mail: registrar@uni-mysore.ac.in
www.uni-mysore.ac.in

# ಮೈಸೂರು ವಿಶ್ವವಿದ್ಯಾನಿಲಯ

ಸ್ಥಾಪನೆ: 1916

ವಿಶ್ವವಿದ್ಯಾನಿಲಯ ಕಾರ್ಯಸೌಧ,
ಕ್ರಾಫರ್ಡ್ ಭವನ, ಮೈಸೂರು

ಸಂಖ್ಯೆ: ಜಿಎಲ್–1/192/2022–23

ದಿನಾಂಕ: 16.02.2026

## ಸುತ್ತೋಲೆ

**ವಿಷಯ:** ಮಾನಸಗಂಗೋತ್ರಿಯ ಆವರಣದಲ್ಲಿ ಹಾಗೂ ವಿವಿಧ ಅಧ್ಯಯನ ವಿಭಾಗಗಳ ಕಾರ್ಯಕ್ರಮದಲ್ಲಿ ಡಿಜೆ ಸೌಂಡ್ ಸಿಸ್ಟಮ್ ಬಳಸುತ್ತಿರುವ ಬಗ್ಗೆ.

**ಉಲ್ಲೇಖ:** ಸಿಂಡಿಕೇಟ್ ಸಭೆಯ ದಿನಾಂಕ: 19.12.2025

*******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ದಿನಾಂಕ: 19.12.2025ರಂದು ಜರುಗಿದ ಸಿಂಡಿಕೇಟ್ ಸಭೆಯ ನಿರ್ಣಯದ ಅನ್ವಯ ವಿಶ್ವವಿದ್ಯಾನಿಲಯದ ಮಾನಸಗಂಗೋತ್ರಿಯ ಎಲ್ಲಾ ಅಧ್ಯಯನ ವಿಭಾಗದ ವತಿಯಿಂದ ಹಾಗೂ ಇತರೆ ಸಂಘ ಸಂಸ್ಥೆಯ ವತಿಯಿಂದ ಆಯೋಜಿಸುವ ಕಾರ್ಯಕ್ರಮಗಳಲ್ಲಿ ಡಿಜೆ ಸೌಂಡ್ ಸಿಸ್ಟಮ್ ಬಳಸುತ್ತಿರುವುದು ವಿಶ್ವವಿದ್ಯಾನಿಲಯದ ಶೈಕ್ಷಣಿಕ ಹಿತದೃಷ್ಟಿಯಿಂದ ಉತ್ತಮ ಬೆಳವಣಿಗೆಯಾಗಿರುವುದಿಲ್ಲ. ಆದ್ದರಿಂದ ಡಿಜೆ ಸೌಂಡ್ ಸಿಸ್ಟಮ್ ಬಳಸುವ ಸಂಬಂಧ ಈ ಕೆಳಕಂಡ ಅಂಶಗಳನ್ನು ಗಮನಿಸಿ ಕಟ್ಟುನಿಟ್ಟಾಗಿ ಅದರಂತೆ ಕ್ರಮವಹಿಸಲು ತಿಳಿಸಲಾಗಿದೆ.

- ಅಧ್ಯಯನ ವಿಭಾಗ/ಘಟಕ ಕಾಲೇಜುಗಳ ವಿದ್ಯಾರ್ಥಿಗಳು ಆಯೋಜಿಸುವ ಕಾರ್ಯಕ್ರಮಗಳಲ್ಲಿ ಡಿಜೆ ಸೌಂಡ್ ಸಿಸ್ಟಮ್ ಬಳಸದಿರುವಂತೆ ವಿಭಾಗದ ಅಧ್ಯಕ್ಷರು/ಪ್ರಾಂಶುಪಾಲರು ಮೇಲ್ವಿಚಾರಣೆ ಮಾಡುವುದು ಮತ್ತು ಇಂತಹ ಕಾರ್ಯಕ್ರಮಗಳನ್ನು ಆಯೋಜಿಸುವಾಗ ಧ್ವನಿವರ್ಧಕಗಳನ್ನು ಇತರೆ ಅಧ್ಯಯನ ವಿಭಾಗಗಳು/ತರಗತಿಗಳಿಗೆ ಅನಾನುಕೂಲವಾಗದಂತೆ ಆಯಾ ಅಧ್ಯಯನ ವಿಭಾಗಗಳ ಮುಖ್ಯಸ್ಥರು/ಕಾಲೇಜಿನ ಪ್ರಾಂಶುಪಾಲರು ಎಚ್ಚರಿಕೆ ಕ್ರಮ ಅನುಸರಿಸುವುದು.
- ವಿದ್ಯಾರ್ಥಿ ಸಂಘಟನೆಗಳು ಆಯೋಜಿಸುವ ಕಾರ್ಯಕ್ರಮಗಳನ್ನು ವಿಶ್ವವಿದ್ಯಾನಿಲಯದ ಪೂರ್ವಾನುಮತಿಯಿಲ್ಲದೇ ಆಯೋಜಿಸುವಂತಿಲ್ಲ ಮತ್ತು ವಿಶ್ವವಿದ್ಯಾನಿಲಯದ ಹಾಗೂ ಸಂಬಂಧಪಟ್ಟ ಪೊಲೀಸ್ ಠಾಣೆಯಿಂದ ಕಡ್ಡಾಯವಾಗಿ ಅನುಮತಿ ಪಡೆದು ಕಾರ್ಯಕ್ರಮವನ್ನು ಆಯೋಜಿಸಿದಲ್ಲಿ ವಿಶ್ವವಿದ್ಯಾನಿಲಯದ ಆಡಳಿತಾಧಿಕಾರಿಗಳು ಅದನ್ನು ಪರಿಶೀಲಿಸಿ ಕಾರ್ಯಕ್ರಮಕ್ಕೆ ಅನುವು ಮಾಡಿಕೊಡುವುದು.

16/2/26

ಕುಲಸಚಿವರು

ಮೈಸೂರು ವಿಶ್ವವಿದ್ಯಾನಿಲಯ
ಮೈಸೂರು

**ಇವರಿಗೆ:**

1. ಆಡಳಿತಾಧಿಕಾರಿಗಳು, ಆಡಳಿತಾಧಿಕಾರಿಗಳ ಕಛೇರಿ, ಮಾನಸಗಂಗೋತ್ರಿ, ಮೈಸೂರು : ಇವರಿಗೆ ಮಾನಸಗಂಗೋತ್ರಿಯ ಆವರಣದಲ್ಲಿ ಆಯೋಜಿಸುವ ಯಾವುದೇ ಕಾರ್ಯಕ್ರಮಕ್ಕೆ ವಿಶ್ವವಿದ್ಯಾನಿಲಯದ ಪೂರ್ವಾನುಮತಿಯ ಆದೇಶ ಮತ್ತು ಸಂಬಂಧಪಟ್ಟ ಪೊಲೀಸ್ ಇಲಾಖೆಯ ಅನುಮತಿಯ ಪ್ರತಿಯನ್ನು ಕಡ್ಡಾಯವಾಗಿ ಪರಿಶೀಲಿಸಿ, ತದನಂತರ ಕಾರ್ಯಕ್ರಮವನ್ನು ಆಯೋಜಿಸಲು ಅನುವು ಮಾಡಿಕೊಡುವಂತೆ ಸೂಚಿಸಿದೆ.
2. ನಿರ್ದೇಶಕರು, ವಿದ್ಯಾರ್ಥಿ ಕ್ಷೇಮಪಾಲನಾ ನಿರ್ದೇಶನಾಲಯ, ಮಾನಸಗಂಗೋತ್ರಿ, ಮೈಸೂರು
3. ಕಾರ್ಯಪಾಲಕ ಅಭಿಯಂತರರು, ವಿಶ್ವವಿದ್ಯಾನಿಲಯ ಇಂಜಿನಿಯರಿಂಗ್ ವಿಭಾಗ, ಮೈಸೂರು
4. ಅಧ್ಯಕ್ಷರು/ನಿರ್ದೇಶಕರು, ಎಲ್ಲಾ ಸ್ನಾತಕೋತ್ತರ ಅಧ್ಯಯನ ವಿಭಾಗ, ಮಾನಸಗಂಗೋತ್ರಿ, ಮೈಸೂರು
5. ನಿರ್ದೇಶಕರು, ದೈಹಿಕ ಶಿಕ್ಷಣ ವಿಭಾಗ, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
6. ಪ್ರಾಂಶುಪಾಲರು, ಮಹಾರಾಜ/ಯುವರಾಜ/ಸಂಜೆ ಕಾಲೇಜು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
7. ಪ್ರಾಂಶುಪಾಲರು, ಲಲಿತ ಕಲಾ ಕಾಲೇಜು, ಮಾನಸಗಂಗೋತ್ರಿ, ಮೈಸೂರು
8. ಎಲ್ಲಾ ಬಟವಾಡೆ ಅಧಿಕಾರಿಗಳು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು
9. ಎಲ್ಲಾ ಉಪಕುಲಸಚಿವರು/ಸಹಾಯಕ ಕುಲಸಚಿವರು/ಅಧೀಕ್ಷಕರು, ಮೈವಿವಿ, ಮೈಸೂರು
10. ಮಾನ್ಯ ಕುಲಪತಿ/ಕುಲಸಚಿವ/ಹಣಕಾಸು ಅಧಿಕಾರಿಯವರ ಆಪ್ತಸಹಾಯಕರು, ಮೈಸೂರು ವಿಶ್ವವಿದ್ಯಾನಿಲಯ, ಮೈಸೂರು.
11. ಕಛೇರಿ ಪ್ರತಿ